**ದಿನಾಂಕ 16.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು .**

**ಮುಖ್ಯ ವಿಚಾರಣೆಃ 3ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ .

ಚಾಲನಾ ಪರವಾನಗಿ ಮತ್ತು ಆಧಾರ್ ಕಾರ್ಡಿನ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಗಳನ್ನು ಕ್ರಮವಾಗಿ **ನಿ.ಆರ್ 1 ಮತ್ತು 2** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ಆಪಾದಿತ ವಾಹನವನ್ನು ನಾನು ಖರೀದಿ ಮಾಡಿರುವುದಿಲ್ಲ. ಅಪಘಾತವಾದ ದಿನಾಂಕದಂದು ಆಪಾದಿತ ವಾಹನವನ್ನು ಯಾರು ಚಾಲನೆ ಮಾಡುತ್ತಿದ್ದರು ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ವಿರುದ್ದ ಅಂತಿಮ ವರದಿಯನ್ನು ಯಾವ ಕಾರಣಕ್ಕಾಗಿ ಸಲ್ಲಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಅಂತಿಮ ವರದಿಯನ್ನು ಯಾರ ವಿರುದ್ದ ಸಲ್ಲಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಅಪಘಾತವಾದ ದಿನಾಂಕದಂದು ನಾನೇ ಆಪಾದಿತ ವಾಹನವನ್ನು ಚಾಲನೆ ಮಾಡುತ್ತಿದ್ದು, ನನ್ನ ಅಜಾಗರೂಕ ಚಾಲನೆಯ ಪರಿಣಾಮ ಕದಿರಪ್ಪ ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ. 1ನೇ ಎದುರುದಾರರು ವಾಹನವನ್ನು ನನಗೆ ಮಾರಾಟ ಮಾಡಿ ಸೂಕ್ತ ದಾಖಲಾತಿಗಳಿಗೆ ಸಹಿ ಮಾಡಿ ನೀಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ತಪ್ಪಿನಿಂದ ಅಪಘಾತವಾದ ಕಾರಣ ನನ್ನ ವಿರುದ್ದ ಅಂತಿಮ ವರದಿ ಸಲ್ಲಿಸಿದ್ದರೂ ಸಹ

ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆಪಾದಿತ ವಾಹನ ನನಗೆ ಸೇರಿದ್ದರೂ ಮತ್ತು ನನ್ನ ತಪ್ಪಿನಿಂದ ಅಪಘಾತವಾಗಿದ್ದರೂ ಸಹ ಪರಿಹಾರ ಪಾವತಿಸುವ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ 2ನೇ ಎದುರುದಾರರ ಪರ ಮಾನ್ಯ ವಕೀಲರಿಂದ.</u>**

ಪ್ರಸ್ತುತ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇದೆ. ಆಪಾದಿತ ವಾಹನದ ಮಾಲೀಕರು ಯಾರು ಎಂದು ನನಗೆ ಗೊತ್ತಿಲ್ಲ. ನಾನು ಯಾವ ಕಾರಣಕ್ಕಾಗಿ ನಿ.ಆರ್ **1** ಅನ್ನು ಹಾಜರುಪಡಿಸಿದ್ದೇನೆ ಎಂದು ನನಗೆ ಗೊತ್ತಿಲ್ಲ. ನನ್ನನ್ನು ಆರೋಪಿಯನ್ನಾಗಿ ಅಂತಿಮ ವರದಿಯಲ್ಲಿ ಕಾಣಿಸಿರುವ ವಿಚಾರ ನನಗೆ ಗೊತ್ತಿಲ್ಲ. **1**ನೇ ಎದುರುದಾರರು ಆಪಾದಿತ ವಾಹನದ ಮಾಲೀಕರಾಗಿದ್ದು, ನಾನು ಚಾಲಕನಾಗಿದ್ದೆ ಎಂದರೆ ಸರಿಯಲ್ಲ. ಆಪಾದಿತ ವಾಹನಕ್ಕೆ ವಿಮೆ ಇಲ್ಲದ ವಿಚಾರ ತಿಳಿದಿದ್ದರೂ ಸಹ ನಾನು ಅದನ್ನು ಚಾಲನೆ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸೂಕ್ತ ದಾಖಲಾತಿಗಳಿಲ್ಲದೇ ವಾಹನವನ್ನು ಚಾಲನೆ ಮಾಡಿ ಅಪಘಾತಪಡಿಸಿದ ಪರಿಣಾಮ ನಾವು ಪರಿಹಾರ ಪಾವತಿಸಲು ಬಾಧ್ಯಸ್ಥರು ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.</u>**

**1**ನೇ ಎದುರುದಾರರ ಪರ ಮಾನ್ಯ ವಕೀಲರು ಗೈರು ಹಾಜರಿದ್ದ ಕಾರಣ ಪಾಟೀ ಸವಾಲನ್ನು ಮುಂದೂಡಲಾಯಿತು .

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**